# <u>ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಾರವಾರ</u>

## ಸಿ.ಸಿ. ನಂ. 2335/25

ಚಾ.ಸಾ. 4

ಫ್ರಾ.ಸಾ. 2

| | | |
|---|---|---|
| ಸಾಕ್ಷಿದಾರರ ಹೆಸರು | - | ಕುಮಾರಿ ಸೂರ್ತಿ ನಾಯ್ಕ |
| ತಂದೆಯ ಹೆಸರು | - | ಸುಭಾಷ್ ನಾಯ್ಕ |
| ವಯಸ್ಸು | - | 17 ವರ್ಷ |
| ಉದ್ಯೋಗ | - | ವಿದ್ಯಾರ್ಥಿನಿ |
| ವಾಸ್ತವ್ಯ | - | ಬಾಂಡಿಶಿಟ್ಟಾ, ಕಾರವಾರ |

(ಇಂದು ದಿನಾಂಕಃ 08-04-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

(ಸಾಕ್ಷಿದಾರರು ಕೊಂಕಣಿ ಭಾಷೆ ಮಾತನಾಡುವವರಾಗಿದ್ದರಿಂದ ವಕೀಲರಾಗಿರುವ ಶ್ರೀ ವಿ.ಜಿ.ಎ. ವಕೀಲರನ್ನು ಕನ್ನಡ ಭಾಷೆಗೆ ಭಾಷಾಂತರ ಮಾಡಲು ನೇಮಿಸಿಕೊಳ್ಳಲಾಯಿತು.)

**<u>ಮುಖ್ಯ ವಿಚಾರಣೆಃ ಮಾನ್ಯ ಹಿರಿಯ ಸ.ಸ.ಅ. ರವರಿಂದಃ</u>**

ಆರೋಪಿ ನನ್ನ ದೊಡ್ಡಪ್ಪನ ಮಗ. ಚಾ.ಸಾ.1 ನನ್ನ ತಾಯಿ. ಆರೋಪಿ ನಮ್ಮೊಂದಿಗೆ ಯಾವುದೇ ಗಲಾಟೆ ಮಾಡಿಲ್ಲ, ಹಲ್ಲೆ ಮಾಡಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿಲ್ಲ. ನಾನು ಪೊಲೀಸರ ಮುಂದೆ ಹೇಳಿಕೆ ನೀಡಿಲ್ಲ. ಪೊಲೀಸರ ಕೋರಿಕೆಯಂತೆ ಅವರು ಹೇಳಿದಂತೆ ನಾನು ಕಲಂ 183 ಬಿ.ಎನ್.ಎಸ್.ಎಸ್. ಅಡಿಯಲ್ಲಿ ಹೇಳಿಕೆ ನೀಡಿರುತ್ತೇನೆ. ಸದರಿ ಹೇಳಿಕೆಯನ್ನು ನಿ.ಪಿ. 5 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.5(ಎ) ಎಂದು ಗುರುತಿಸಲಾಯಿತು. ನಾವು ಮತ್ತು ಆರೋಪಿ ರಾಜಿಯಾಗಿದ್ದೇವೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಮಾನ್ಯ ಹಿರಿಯ ಸ.ಸ.ಅ. ರವರು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಹಿರಿಯ ಸ.ಸ.ಅ. ರವರಿಂದಃ</u>**

ದಿನಾಂಕ 30-04-2025 ರಂದು ರಾತ್ರಿ 11.15 ಗಂಟೆ ಸಮಯದಲ್ಲಿ ನಾನು, ಚಾ.ಸಾ.1 ರವರು ಮನೆಯಲ್ಲಿದ್ದಾಗ ಆರೋಪಿ ಸಾರಾಯಿ ಕುಡಿದು ಬಂದು ಏಕಾಏಕಿ ಬಂದು ನನಗೆ ಇಲ್ಲಸಲ್ಲದ ಮಾತುಗಳಿಂದ ಬೈದು ನನ್ನ ಕೆನ್ನೆಗೆ ಹೊಡೆದಿದ್ದಾನೆ ಎಂದರೆ ಸರಿಯಲ್ಲ. ಚಾ.ಸಾ.1 ರವರನ್ನು ದೂಡಾಡಿದ್ದಾನೆ ಎಂದರೆ ಸರಿಯಲ್ಲ.

ದಿನಾಂಕ 06-05-2025 ರಂದು ನಾನು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ನಾನು -------------- ಮನೆಮದ್ದು ಮಾಡಿಕೊಂಡಿರುತ್ತೇನೆ ಎಂದು ಈಗ ಓದಿ ಹೇಳಿದಂತೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿ.ಪಿ.6 ಎಂದು ಗುರುತಿಸಲಾಯಿತು. ಆರೋಪಿಯೊಂದಿಗೆ ರಾಜಿ ಮಾಡಿಕೊಂಡಿದ್ದೇನೆ ಎಂದರೆ ಸರಿ. ಆರೋಪಿ ನನ್ನ ದೊಡ್ಡಪ್ಪನ ಮಗನಾಗಿದ್ದರಿಂದ ಆತನಿಗೆ ಸಹಾಯ ಮಾಡಲು ಗಲಾಟೆ ನಡೆದಿದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಹಾಜರಿದ್ದು, ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ.

ಮುಖ್ಯ ನ್ಯಾಯಿಕ ದಂ. ಕಾರವಾರ